55014

# ಕರ್ನಾಟಕ ವಿಧಾನ ಪರಿಷತ್ತು

1) ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 358
2) ಸದಸ್ಯರ ಹೆಸರು : ಶ್ರೀ ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
3) ಉತ್ತರಿಸುವ ದಿನಾಂಕ : 16.02.2023
4) ಉತ್ತರಿಸುವವರು : ಮಾನ್ಯ ಮುಖ್ಯಮಂತ್ರಿಗಳು

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕೃಷಿ ಉತ್ಪನ್ನಗಳು, ರಸಗೊಬ್ಬರ, ಕೀಟನಾಶಕ, ನೀರಾವರಿ ಉತ್ಪನ್ನಗಳು, ಹೈನುಗಾರಿಕೆ ಉತ್ಪನ್ನಗಳು, ಕೃಷಿ ಪರಿಕರಗಳು ಸೇರಿದಂತೆ ಹಾಲು ಮೊಸರಿನ ಮೇಲೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು, ಜಿ.ಎಸ್.ಟಿ. ಮತ್ತು ಎಸ್.ಜಿ.ಎಸ್.ಟಿ. ತೆರಿಗೆ ವಿಧಿಸಿರುವುದರಿಂದ ರಾಜ್ಯದ ರೈತರು ತೆರಿಗೆ ಭಾರದಿಂದ ತತ್ತರಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ರೈತರು ಖರೀದಿಸುವ ಬಿತ್ತನೆ ಬೀಜಗಳಿಗೆ ಯಾವುದೇ ಜಿ.ಎಸ್.ಟಿ. ಇರುವುದಿಲ್ಲ ಹಾಗೂ ರೈತರಿಂದ ನೇರವಾಗಿ ಮಾರಾಟವಾಗುವ ಕೃಷಿ ಉತ್ಪನ್ನಗಳು, ಹೈನುಗಾರಿಕೆ ಉತ್ಪನ್ನಗಳು, ನೀರಾವರಿ ಉತ್ಪನ್ನಗಳಿಗೆ ಯಾವುದೇ ಜಿ.ಎಸ್.ಟಿ. ಇರುವುದಿಲ್ಲ.<br><br>ಮುಂದುವರೆದು, ರೈತರ ಅನುಕೂಲಕ್ಕಾಗಿ ಈ ಕೆಳಕಂಡ ಯೋಜನೆಗಳನ್ನು ಸರ್ಕಾರದ ವತಿಯಿಂದ ಅನುಷ್ಠಾನಗೊಳಿಸಲಾಗಿದೆ;<br><br>• ಕೃಷಿ ಉತ್ಪನ್ನಗಳಿಗೆ (ಬೆಳೆಗಳು) ಬೆಂಬಲ ಬೆಲೆ ನೀಡಲಾಗುತ್ತಿದೆ.<br>• ಬಿತ್ತನೆ ಬೀಜಗಳು, ರಸಗೊಬ್ಬರ, ಜೈವಿಕ ಗೊಬ್ಬರ, ಕೀಟ ನಾಶಕಗಳನ್ನು ರಿಯಾಯಿತಿ ದರದಲ್ಲಿ ನೀಡಲಾಗುತ್ತಿದೆ.<br>• ಹನಿ ನೀರಾವರಿ ಮತ್ತು ತುಂತುರು ನೀರಾವರಿ ಅಳವಡಿಸಲು ಸಹಾಯಧನ ನೀಡಲಾಗುತ್ತಿದೆ.<br>• ಗುಣಮಟ್ಟದ ಹಾಲು ಉತ್ಪಾದಕರಿಗೆ ಪ್ರೋತ್ಸಾಹ ಧನ ನೀಡಲಾಗುತ್ತಿದೆ.<br>• ಕೃಷಿ ಯಂತ್ರೋಪಕರಣಗಳಿಗೆ ಸರ್ಕಾರದ ವತಿಯಿಂದ ಡೀಸೆಲ್ ಸಬ್ಸಿಡಿ ನೀಡಲಾಗುತ್ತಿದೆ.<br>• ಟಾರ್ಪಲಿನ್, ಕಿರು ಎಣ್ಣೆಗಾಣ, ಸಂಸ್ಕರಣಾ ಘಟಕಕ್ಕೆ ಸಹಾಯಧನ ನೀಡಲಾಗುತ್ತಿದೆ.<br>• ಪ್ರಧಾನ ಮಂತ್ರಿ ಫಸಲ್ ಭೀಮಾ ಯೋಜನೆಯಡಿಯಲ್ಲಿ ರೈತರು ಬೆಳೆಯುವ ಬೆಳೆಗಳಿಗೆ ವಿಮಾ ಸೌಲಭ್ಯಕ್ಕಾಗಿ ರಾಜ್ಯ ಸರ್ಕಾರದ ವತಿಯಿಂದ ಸಹಾಯಧನವನ್ನು ನೀಡಲಾಗುತ್ತಿದೆ.<br>• 10 ಹೆಚ್ ಪಿ ವರೆಗಿನ ನೀರಾವರಿ ಪಂಪ್ ಸೆಟ್ ಗಳಿಗೆ ಹಾಗೂ ಭಾಗ್ಯಜ್ಯೋತಿ ಮತ್ತು ಕುಟೀರಜ್ಯೋತಿ ಸ್ಥಾವರಗಳಿಗೆ ಉಚಿತ ವಿದ್ಯುತ್ತನ್ನು ಸರಬರಾಜು ಮಾಡಲು ಸಹಾಯಧನವನ್ನು ನೀಡಲಾಗುತ್ತಿದೆ. |
| ಆ) | ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು; (ವಿವರ ನೀಡುವುದು) | ಮೇಲೆ ಉತ್ತರಿಸಲಾಗಿದೆ. |
| ಇ) | ಎಲ್ಲಾ ರೀತಿಯ ಬೆಲೆ ಏರಿಕೆಯಿಂದ ರೈತರು ಸಂಕಷ್ಟದಲ್ಲಿರುವುದರಿಂದ ಜಿ.ಎಸ್.ಟಿ. ಮತ್ತು ಎಸ್.ಜಿ.ಎಸ್.ಟಿ. ತೆರಿಗೆಯನ್ನು ರದ್ದುಪಡಿಸಲು | ಪ್ರಸ್ತುತ ಕೇಂದ್ರ ಮತ್ತು ರಾಜ್ಯ ಸರ್ಕಾರಗಳಿಂದ ವಿಧಿಸಲಾಗುತ್ತಿರುವ ಸರಕು ಮತ್ತು ಸೇವಾ ತೆರಿಗೆಯ ದರಗಳನ್ನು ಪರಿಷ್ಕರಿಸಬೇಕಾದಲ್ಲಿ, GST ಕೌನ್ಸಿಲ್‌ನಲ್ಲಿ |

| | | |
|---|---|---|
| | ಅಥವಾ ಕಡಿಮೆ ಮಾಡಲು ಸರ್ಕಾರದ ನಿಲುವೇನು; | ಎಲ್ಲಾ ರಾಜ್ಯಗಳ ಪ್ರತಿನಿಧಿಗಳು ಸೇರಿ ಚರ್ಚಿಸಿ ತೀರ್ಮಾನ ತೆಗೆದುಕೊಳ್ಳಲಾಗುತ್ತದೆ. ಈ ವಿಷಯದಲ್ಲಿ ರಾಜ್ಯ ಸರ್ಕಾರಕ್ಕೆ ಸ್ವತಂತ್ರವಾಗಿ ನಿರ್ಧಾರ ತೆಗೆದುಕೊಳ್ಳುವ ಅಧಿಕಾರ ಇರುವುದಿಲ್ಲ. |
| ಈ) | ಸರ್ಕಾರ ಈ ಬಗ್ಗೆ ಆಲೋಚಿಸಿ ತೆರಿಗೆಯನ್ನು ರದ್ದುಪಡಿಸಲು ಕ್ರಮ ಕೈಗೊಳ್ಳುವುದೇ? | |

ಸಂಖ್ಯೆ: ಆಇ 13 ಸಿಎಸ್ಎಲ್ 2023

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ